ಹೈಕೋರ್ಟಿನಲ್ಲಿ ದಾಖಲಾದ ಪ್ರಕರಣಗಳು

2872:(3858)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಕಾನೂನು ಸಂಸದೀಯ ವ್ಯವಹಾರ ಶಾಸನ ರಚನೆ ವಾರ್ತಾ ಮತ್ತು ಪ್ರಚಾರ ಪ್ರವಾಸೋದ್ಯಮ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಹೈಕೋರ್ಟಿನಲ್ಲಿ ದಿನಾಂಕ 1-1-98ರಿಂದ 30-9-98ರವರೆಗೆ ದಾಖಲಾದ ದಾವೆಗಳ ಒಟ್ಟು ಸಂಖ್ಯೆ ಎಷ್ಟು? ಚಾಲ್ತಿಯಲ್ಲಿರುವ ಒಟ್ಟು ಪ್ರಕರಣಗಳ ಸಂಖ್ಯೆ ಎಷ್ಟು?

ಆ) ಪ್ರಕರಣಗಳ ಶೀಘ್ರ ವಿಲೇವಾರಿಗಾಗಿ ಕೈಗೊಂಡ ಕ್ರಮಗಳೇನು?

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಸಚಿವರು):

ಅ) ರಾಜ್ಯದ ಉಚ್ಚ ನ್ಯಾಯಾಲಯದಲ್ಲಿ ದಿನಾಂಕ 1-1-98ರಿಂದ 30-9-98ರವರೆಗೆ 53,328 ಪ್ರಕರಣಗಳು ದಾಖಲಾಗಿದ್ದು ದಿನಾಂಕ 1-10-98ರಲ್ಲಿದ್ದಂತೆ 94,972 ಪ್ರಕರಣಗಳು ಬಾಕಿ ಇರುತ್ತವೆ.

ಆ) ಉಚ್ಚನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳನ್ನು ಶೀಘ್ರ ವಿಲೇವಾರಿ ಮಾಡಲು ರಾಜ್ಯ ಸರ್ಕಾರವು ಯಾವುದೇ ಕ್ರಮ ಕೈಗೊಳ್ಳುವ ಪ್ರಶ್ನೆ ಉದ್ಭವಿಸುವದಿಲ್ಲ.

ಹುಬ್ಬಳ್ಳಿ-ಅಂಕೋಲಾ ರೈಲು ಮಾರ್ಗ

2873:(3857)

ಶ್ರೀ ಜಗದೀಶ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ಅಂಕೋಲಾ ರೈಲು ಮಾರ್ಗದ ಸಲುವಾಗಿ ಸರ್ವೆ ನಡೆಸಲಾಗುತ್ತಿದೆಯೇ?

ಆ) ಈ ಬಗ್ಗೆ ಭೂ ಸ್ವಾಧೀನ ಪಡಿಸಿಕೊಳ್ಳುವ ಕೆಲಸ ಪ್ರಾರಂಭವಾಗಿದೆಯೇ?

ಇ) ಹಾಗಿದ್ದಲ್ಲಿ ಈ ಬಗ್ಗೆ ಎಷ್ಟು ಭೂಮಿಯನ್ನು ಭೂಸ್ವಾಧೀನ ಪಡಿಸಿಕೊಳ್ಳಲಾಗುವುದು?